**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. 613/2019**

| | | |
|---|---|---|
| ಸಾಕ್ಷಿಯ ಹೆಸರುಃ | ಚಂದ್ರ | ಫ್ರಾಸಾಃಃ 5 |
| ತಂದೆಯ ಹೆಸರುಃ | ಕರಿಯಯ್ಯ | ಚಾಸಾಃಃ 5 |
| ವಯಸ್ಸುಃ | 40 ವರ್ಷ | ಪ್ರಮಾಣೀಕರಿಸಿದ<br>ದಿಃ 16/12/2024 |
| ಉದ್ಯೋಗಃ | ಕೂಲಿ | |
| ವಾಸಸ್ಥಳಃ | ಬೆಟ್ಟದಪುರ | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**

ಚಾಸಾ-4 ಗೊತ್ತು. ಚಾಸಾ-6 ರವರು ಗೊತ್ತಿಲ್ಲ. ಆರೋಪಿತ ಗೊತ್ತಿಲ್ಲ. ಸುಮಾರು 7-8 ವರ್ಷಗಳ ಹಿಂದೆ ಕೂಲಿ ಕೆಲಸ ಮಾಡಿಕೊಂಡು ಬರುತ್ತಿರುವಾಗ ಪೊಲೀಸ್ ಠಾಣೆಯಲ್ಲಿ ನನ್ನ ಸಹಿ ಪಡೆದರು. ಸಾಕ್ಷಿಯು ನಿಪಿ.1-ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಇ)** ಎಂದು ಗುರುತಿಸಲಾಯಿತು. ನಿಪಿ.1 ರಲ್ಲಿರುವ ಅಂಶಗಳು ನನಗೆ ಗೊತ್ತಿಲ್ಲ. ಈ ಪ್ರಕರಣದ ಯಾವುದೇ ವಿಚಾರ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 18/06/2016 ರಂದು ಚಾಸಾ-1 ರವರು ದಾಳಿ ಸಂಬಂಧ ನಮ್ಮನ್ನು ಕರೆದುಕೊಂಡು ಘಟನಾ ಸ್ಥಳಕ್ಕೆ ಬೇಟಿ ನೀಡಿ ನಿಪಿ.1 ರಂತೆ ಪಂಚನಾಮೆ ಮಾಡಿ, ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಈಗ ನನಗೆ ಓದಿ ಹೇಳಿದಂತೆ ''ನಾನು ಮೇಲ್ಕಂಡಂತೆ ವಿಳಾಸದಲ್ಲಿ ............................ ಮಾಲನ್ನು ನೋಡಿರುತ್ತೇನೆ. ಮತ್ತೆ ನೋಡಿದರೆ ಗುರುತಿಸುತ್ತೇನೆ'' ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ.8** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**